# ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಕೆ.ಪ್ರತಾಪಸಿಂಹ ನಾಯಕ್ ಇವರು ನಿಯಮ-72 ರಡಿ ಪ್ರಸ್ತಾಪಿಸಿರುವ ಸೂಚನೆಗೆ ಉತ್ತರ

**ಪ್ರಶ್ನೆ:-**

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೆಂಪು ಕಲ್ಲು ಗಣಿಗಾರಿಕೆ ಸಂಬಂಧ ರಾಯಲ್ಟಿ ಹೆಚ್ಚಳ ಮಾಡಿ ಕಠಿಣ ನಿಯಮಗಳನ್ನು ರೂಪಿಸಿರುವುದರಿಂದ, ಕಟ್ಟಡ ನಿರ್ಮಾಣ ಕ್ಷೇತ್ರಕ್ಕೆ ಅತ್ಯವಶ್ಯಕವಾಗಿ ಬೇಕಾಗಿರುವ ಕೆಂಪು ಕಲ್ಲು ಬೇಡಿಕೆಗನುಗುಣವಾಗಿ ಪೂರೈಕೆಯಾಗದೆ ವ್ಯತ್ಯಯ ಉಂಟಾಗಿ ಕಟ್ಟಡ ನಿರ್ಮಾಣ ಕ್ಷೇತ್ರ ತುಂಬಾ ಸಂಕಷ್ಟಕ್ಕೆ ಸಿಲುಕಿದೆ. ಕೆಂಪು ಕಲ್ಲು ಗಣಿಗಾರಿಕೆ ಜ್ವಲಂತ ಸಮಸ್ಯೆಯಾಗಿ ಕಾಡುವುದರ ಜೊತೆಗೆ ಜಿಲ್ಲೆಯ ಆರ್ಥಿಕತೆಗೂ ದೊಡ್ಡ ಹೊಡೆತ ನೀಡಿದೆ. ಕಟ್ಟಡ ನಿರ್ಮಾಣ ಕ್ಷೇತ್ರ ಹಾಗೂ ಕಾರ್ಮಿಕ ವರ್ಗ ಅತ್ಯಂತ ಸಂಕಷ್ಟದ ಪರಿಸ್ಥಿತಿ ಎದುರಿಸುತ್ತಿವೆ.

ಕೆಂಪುಕಲ್ಲು ಗಣಿಗಾರಿಕೆ ನಿಯಮಗಳನ್ನು ಸರಳೀಕರಿಸಿ, ಜಿಲ್ಲೆಯಲ್ಲಿ ಬೇಡಿಕೆಗನುಗುಣವಾಗಿ ಕೆಂಪು ಕಲ್ಲು ಪೂರೈಕೆಗೆ ಸರ್ಕಾರ ಇದುವರೆಗೆ ಯಾವುದೇ ಕ್ರಮ ವಹಿಸದೇ ಇರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಇಲಾಖಾ ಸಚಿವರ ಗಮನ ಸೆಳೆದಿರುತ್ತಾರೆ.

**ಉತ್ತರ:-**

- ದಕ್ಷಿಣ ಕನ್ನಡ ಜಿಲ್ಲೆಯ ವ್ಯಾಪ್ತಿಯಲ್ಲಿ ಕೆಂಪುಕಲ್ಲು ಗಣಿಗಾರಿಕೆಗೆ 19 ಗುತ್ತಿಗೆಗಳನ್ನು ಮಂಜೂರು ಮಾಡಿ, ಚಾಲ್ತಿಯಲ್ಲಿದ್ದು, ಸದರಿ ಗುತ್ತಿಗೆಗಳಿಂದ 2024-25ನೇ ಸಾಲಿನಲ್ಲಿ 1,14,539 ಮೆಟ್ರಿಕ್ ಟನ್ ಮತ್ತು 2025-26ನೇ ಸಾಲಿನಲ್ಲಿ 9,14,698 ಮೆಟ್ರಿಕ್ ಟನ್ ಕೆಂಪು ಕಲ್ಲನ್ನು ಉತ್ಪಾದಿಸಿ ಸಾಗಾಣಿಕೆ ಮಾಡಿದೆ.
- ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು-3-A(a) ರಂತೆ ಲ್ಯಾಟರೈಟ್ ತೆಗೆಯಲು 2024-25ನೇ ಸಾಲಿನಲ್ಲಿ 24 ಸಂಖ್ಯೆಯ ಕಾರ್ಯಾದೇಶಗಳನ್ನು ನೀಡಿದ್ದು, 9,659 ಮೆಟ್ರಿಕ್ ಟನ್ ಮತ್ತು 2025-26ನೇ ಸಾಲಿನಲ್ಲಿ 79 ಕಾರ್ಯಾದೇಶಗಳನ್ನು ನೀಡಿದ್ದು, 4,59,654 ಮೆಟ್ರಿಕ್ ಟನ್ ಲ್ಯಾಟರೈಟ್ ಉತ್ಪಾದಿಸಿ ಸಾಗಾಣಿಕೆ ಮಾಡಿದೆ.
- ಕರ್ನಾಟಕ ಉಪಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಗಳು-2025 ದಿನಾಂಕ:17-09-2025ರಂದು ಜಾರಿಗೆ ಬಂದಿದ್ದು, ಸದರಿ ತಿದ್ದುಪಡಿ ನಿಯಮ-3-Aರಲ್ಲಿ ಲ್ಯಾಟರೈಟ್ ಇಟ್ಟಿಗೆ ತೆಗೆಯಲು ಕಾರ್ಯಾದೇಶ ಮತ್ತು ಲೈಸೆನ್ಸ್ ಮಂಜೂರಾತಿಗೆ ಸಂಬಂಧಿಸಿದ ನಿಯಮಗಳನ್ನು ಸರಳೀಕರಣಗೊಳಿಸಿ, ಕೆಂಪು ಕಲ್ಲಿಗೆ ವಿಧಿಸಲಾಗುತ್ತಿದ್ದ ಶುಲ್ಕಗಳನ್ನು ಕಡಿಮೆಗೊಳಿಸಲಾಗಿದೆ.
- ಈ ಸಂಬಂದ ವಿಧಾನ ಸಭೆಯ ಸನ್ಮಾನ್ಯ ಸಭಾಧ್ಯಕ್ಷರು, ಜಿಲ್ಲಾ ಉಸ್ತುವಾರಿ ಸಚಿವರು, ಮಾನ್ಯ ಶಾಸಕರು ಹಾಗೂ ಮಾನ್ಯ ಜನಪ್ರತಿನಿದಿಗಳ ಜೊತೆಗೆ ಸಭೆ ನಡೆಸಿ ಬೇಡಿಕೆಗಳಿಗನುಗುಣವಾಗಿ ಕೆಂಪುಕಲ್ಲು ಪೂರೈಕೆಗೆ ಅಗತ್ಯ ಕ್ರಮ ವಹಿಸಲಾಗುತ್ತಿದೆ.

ಸಿಐ-ಎಂಎಂಎನ್/318/2025

P. P. ikrau

**(ಎಸ್.ಎಸ್.ಮಲ್ಲಿಕಾರ್ಜುನ)**
ಗಣಿ ಮತ್ತು ಭೂವಿಜ್ಞಾನ ಹಾಗೂ
ತೋಟಗಾರಿಕೆ ಸಚಿವರು.